**Akashvani : Bangalore**
**National Bulletin In Kannada**
**11.02.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.02.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಎರಡು ದಿನಗಳ ಯುನಾನಿ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ**

**೨. ಅತ್ಯಂತ ಕಡಿಮೆ ವೆಚ್ಚದಲ್ಲಿ ಜನರಿಗೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ; ಕೃತಕಬುದ್ಧಿಮತ್ತೆ ಕ್ರಿಯಾ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ**

**೩. ಬೆಂಗಳೂರಿನಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ - ಇನ್ವೆಸ್ಟ್ ಕರ್ನಾಟಕ ೨೦೨೫ ಉದ್ಘಾಟಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೪. ಸ್ವಾಮಿತ್ವ ಯೋಜನೆಯಡಿ ಕೇಂದ್ರ ಸರ್ಕಾರದಿಂದ ೨ ಕೋಟಿ ೩೫ ಲಕ್ಷ ಇ-ಆಸ್ತಿ ಕಾರ್ಡ್ ವಿತರಣೆ**

**<><*<><>*><>**

ಯುನಾನಿ ಪದ್ಧತಿಯಲ್ಲಿ ಶಿಕ್ಷಣ, ಸಂಶೋಧನೆ, ಆರೋಗ್ಯ ರಕ್ಷಣೆ ಮತ್ತು ಔಷಧಗಳ ತಯಾರಿಕೆಯಲ್ಲಿ ಭಾರತ ಇಂದು ವಿಶ್ವದಲ್ಲೇ ಪ್ರಮುಖ ಸ್ಥಾನವನ್ನು ಹೊಂದಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಎರಡು ದಿನಗಳ ಯುನಾನಿ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿದ ರಾಷ್ಟ್ರಪತಿಗಳು, ಇಂದು ಗ್ರೀಸ್‌ನ ಯುನಾನ್ ಮತ್ತು ಮಧ್ಯ ಏಷ್ಯಾದ ದೇಶಗಳಲ್ಲಿ ಯುನಾನಿ ವೈದ್ಯಕೀಯ ಪದ್ಧತಿಯನ್ನು ಬಳಸುತ್ತಿರುವಷ್ಟು ನಾವು ಭಾರತದಲ್ಲಿ ಬಳಸುತ್ತಿಲ್ಲ ಎಂದರು. ಯುನಾನಿ ಪದ್ಧತಿಯೊಂದಿಗೆ ಸಂಬಂಧ ಹೊಂದಿರುವ ಸಂಶೋಧಕರು ಮತ್ತು ವೈದ್ಯರು, ಆಧುನಿಕ ವಿಧಾನಗಳು ಮತ್ತು ತಂತ್ರಜ್ಞಾನದ ಉಪಯುಕ್ತ ಅಂಶಗಳನ್ನು ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು.

**<><*<><>*><>**

ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇದೇ ೧೪ ರಿಂದ ೧೬ ರವರೆಗೆ ನಡೆಯಲಿರುವ ೧೧ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ರಾಷ್ಟಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಸಮ್ಮೇಳನದಲ್ಲಿ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರಮುಖರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಆರ್ಥಿಕತೆ, ಭದ್ರತೆ ಮತ್ತು ಸಮಾಜದ ಮೇಲೆ ಕೃತಕಬುದ್ಧಿಮತ್ತೆ-ಎಐ, ದೂರಗಾಮಿ ಪ್ರಭಾವವನ್ನು ಹೊಂದಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಪ್ಯಾರಿಸ್‌ನ ಗ್ರ್ಯಾಂಡ್ ಪಲೈಸ್‌ನಲ್ಲಿ ನಡೆದ ಕೃತಕಬುದ್ಧಿಮತ್ತೆ ಕ್ರಿಯಾ ಶೃಂಗಸಭೆಯ ಸಹ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೈತಿಕ ಆಡಳಿತ ಮತ್ತು ಸಮಗ್ರ ಅಭಿವೃದ್ಧಿಯ ಅಗತ್ಯವನ್ನು ಒತ್ತಿ ಹೇಳಿದರು. ಕೃತಕಬುದ್ಧಿಮತ್ತೆಯು ಅಭೂತಪೂರ್ವ ವೇಗದಲ್ಲಿ ಅಭಿವೃದ್ಧಿ ಹೊಂದುತ್ತಿದೆ ಮತ್ತು ಜವಾಬ್ದಾರಿಯುತ ಎಐ ಆಡಳಿತವನ್ನು ಖಚಿತಪಡಿಸಿಕೊಳ್ಳಲು ಸಾಮೂಹಿಕ ಪ್ರಯತ್ನದ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು. ಭಾರತವು, ೧೪೦ ಕೋಟಿಗೂ ಹೆಚ್ಚು ಜನರಿಗೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಅತ್ಯಂತ ಕಡಿಮೆ ವೆಚ್ಚದಲ್ಲಿ ಯಶಸ್ವಿಯಾಗಿ ನಿರ್ಮಿಸಿದೆ. ಇದು ದೇಶದ ಆರ್ಥಿಕತೆಯನ್ನು ಆಧುನೀಕರಿಸಲು, ಆಡಳಿತವನ್ನು ಸುಧಾರಿಸಲು ಮತ್ತು ಜನರ ಜೀವನವನ್ನು ಪರಿವರ್ತಿಸಲು ಸಹಕಾರಿಯಾಗಿದೆ ಎಂದರು. ಜಗತ್ತು ನಾವೀನ್ಯತೆ ಮತ್ತು ಆಡಳಿತದ ಬಗ್ಗೆ ಆಳವಾಗಿ ಚಿಂತಿಸಬೇಕು ಮತ್ತು ಮುಕ್ತವಾಗಿ ಚರ್ಚಿಸಬೇಕು. ಆಡಳಿತವು ಎಲ್ಲರಿಗೂ, ವಿಶೇಷವಾಗಿ ಜಾಗತಿಕ ದಕ್ಷಿಣದಲ್ಲಿ ಪ್ರವೇಶವನ್ನು ಖಚಿತಪಡಿಸಿಕೊಳ್ಳುವುದರ ಬಗ್ಗೆಯೂ ಆಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

ಸಾರ್ವಜನಿಕ ಒಳಿತಿಗಾಗಿ ಭಾರತ, ಎಐ ಅಪ್ಲಿಕೇಶನ್‌ಗಳನ್ನು ಅಭಿವೃದ್ಧಿಪಡಿಸುತ್ತಿದೆ. ದತ್ತಾಂಶ ಗೌಪತ್ಯೆಯ ಕುರಿತು ಎಐ ಅಳವಡಿಕೆ ಮತ್ತು ತಾಂತ್ರಿಕ, ಕಾನೂನು ಪರಿಹಾರಗಳಲ್ಲಿ ಭಾರತ ಮುಂಚೂಣಿಯಲ್ಲಿದೆ ಎಂದು ಅವರು ತಿಳಿಸಿದರು.

**<><*<><>*><>**

ಕಳೆದ ಒಂದು ದಶಕದ ಅವಧಿಯಲ್ಲಿ ೧೦ನೇ ಸ್ಥಾನದಲಿದ್ದ ಭಾರತ, ೫ನೇ ಅತಿ ದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯ ಯಶೋಭೂಮಿಯಲ್ಲಿ ಏರ್ಪಡಿಸಿರುವ ಭಾರತ ಇಂಧನ ಸಪ್ತಾಹ-೨೦೨೫ ಅನ್ನು ವರ್ಚುಯಲ್ ಮೂಲಕ ಇಂದು ಉದ್ಘಾಟಿಸಿದ ಅವರು ಈ ವಿಷಯ ತಿಳಿಸಿದ್ದಾರೆ. ದೇಶದ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯ ೩೨ ಪಟ್ಟು ಹೆಚ್ಚಾಗಿದ್ದು, ಸೌರ ವಿದ್ಯುತ್ ಉತ್ಪಾದನಾ ರಾಷ್ಟ್ರಗಳ ಪೈಕಿ ಭಾರತ ಮೂರನೇ ಅತಿ ದೊಡ್ಡ ರಾಷ್ಟ್ರವಾಗಿ ರೂಪುಗೊಂಡಿದೆ ಎಂದು ಪ್ರಧಾನಿ ಹೇಳಿದ್ದಾರೆ. ಪಳೆಯುಳಿಕೆರಹಿತ ಇಂಧನ ಉತ್ಪಾದನಾ ಸಾಮರ್ಥ್ಯ ಮೂರು ಪಟ್ಟು ಹೆಚ್ಚಾಗಿದೆ. ಪ್ಯಾರಿಸ್ ಜಿ-೨೦ರ ಒಪ್ಪಂದಗಳಲ್ಲಿ ಒಳಗೊಂಡಿರುವ ಗುರಿಗಳನ್ನು ಸಾಧಿಸುವಲ್ಲಿ ಭಾರತ ಮೊದಲ ರಾಷ್ಟ್ರವಾಗಿದೆ ಎಂದು ಅವರು ಹೇಳಿದ್ದಾರೆ. ಭಾರತ ತನ್ನ ಪ್ರಗತಿಯನ್ನು ಸಾಧಿಸುವುದರ ಜೊತೆಗೆ ವಿಶ್ವದ ಬೆಳವಣಿಗೆಗೂ ಕಾರಣವಾಗಿದೆ. ದೇಶದ ಇಂಧನ ವಲಯ ಈ ಎತ್ತರಕ್ಕೆ ಬೆಳೆಯಲು ತನ್ನದೇ ಆದ ಪಾತ್ರವಹಿಸಿದೆ ಎಂದರು.

**<><*<><>*><>**

ಪರೀಕ್ಷಾ ವಿದ್ಯಾರ್ಥಿಗಳಿಗೆ ಮಾನಸಿಕ ಆರೋಗ್ಯ ಹಾಗೂ ಯೋಗಕ್ಷೇಮದ ಕುರಿತು ತಿಳುವಳಿಕೆ ನೀಡುವ ಅಗತ್ಯವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ವರ್ಷದ ಪರೀಕ್ಷಾ ಪೆ ಚರ್ಚಾ ಸಂಚಿಕೆಯನ್ನು ಇದೇ ವಿಷಯಕ್ಕೆ ಮೀಸಲಾಗಿಸಿದೆ. ಈ ಸಂಚಿಕೆಯನ್ನು ನಾಳೆ ಪ್ರಸಾರ ಮಾಡಲಾಗುವುದು. ಈ ವಿಷಯದ ಬಗ್ಗೆ

ಆಸಕ್ತಿ ಹೊಂದಿರುವ ನಟಿ ದೀಪಿಕಾ ಪಡುಕೋಣೆ ಮಾನಸಿಕ ಆರೋಗ್ಯ ಹಾಗೂ ಯೋಗಕ್ಷೇಮದ ಕುರಿತಾಗಿ ಮಾತನಾಡಲಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

**<><*<><>*><>**

ಬೆಂಗಳೂರಿನ ಅರಮನೆ ಮೈದಾನದಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ- ಇನ್ವೆಸ್ಟ್ ಕರ್ನಾಟಕ - ೨೦೨೫ಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ರಾಜನಾಥ್ ಸಿಂಗ್, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸಹಕಾರಿ ಒಕ್ಕೂಟ ವ್ಯವಸ್ಥೆ ಬಲಗೊಂಡಿದೆ. ಇದು ಸಹಕಾರಿ ಒಕ್ಕೂಟ ವ್ಯವಸ್ಥೆಯ ಯುಗವಾಗಿದೆ. ನಾವು ಟೀಮ್ ಇಂಡಿಯಾದ ನಿಜವಾದ ಮನೋಭಾವದೊಂದಿಗೆ ಕೆಲಸ ಮಾಡಿದಾಗ ಇದು ಸಾಕಾರಗೊಳ್ಳಲಿದೆ ಎಂದು ಹೇಳಿದರು. ಅಭಿವೃದ್ಧಿ ಮತ್ತು ಯಶಸ್ಸಿಗೆ ಕರ್ನಾಟಕ ಉತ್ತಮ ಅಡಿಪಾಯ ಒದಗಿಸಲಿದೆ. ಕರ್ನಾಟಕದಲ್ಲಿ ಹೂಡುವ ಬಂಡವಾಳ ದೇಶದ ಅಭಿವೃದ್ಧಿಗೂ ಪೂರಕವಾಗಲಿದೆ ಎಂದರು.

**ಧ್ವನಿ : ರಾಜನಾಥ್ ಸಿಂಗ್**

ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಸಚಿವರು, ಉದ್ಯಮಿಗಳು ಉಪಸ್ಥಿತರಿದ್ದರು.

**<><*<><>*><>**

ಗ್ರಾಮಗಳ ಸಮೀಕ್ಷೆ ಮತ್ತು ಗ್ರಾಮ ಪ್ರದೇಶಗಳಲ್ಲಿ ಸುಧಾರಿತ ತಂತ್ರಜ್ಞಾನದೊಂದಿಗೆ ನಕ್ಷೆ ರಚನೆ- ಸ್ವಾಮಿತ್ವ ಯೋಜನೆಯಡಿ ಇದುವರೆಗೆ ೧ ಲಕ್ಷ ೫೯ ಸಾವಿರ ಹಳ್ಳಿಗಳಲ್ಲಿ ೨ ಕೋಟಿ ೩೫ ಲಕ್ಷಕ್ಕೂ ಹೆಚ್ಚು ಆಸ್ತಿ ಕಾರ್ಡ್‌ಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಕೇಂದ್ರ ಪಂಚಾಯತ್ ರಾಜ್ ಖಾತೆ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ. ಸಿಂಗ್ ಬಘೇಲ್, ಕಳೆದ ತಿಂಗಳ ೧೮ ರಂದು ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೫೨ ಸಾವಿರ ಹಳ್ಳಿಗಳಲ್ಲಿ ೬೫ ಲಕ್ಷ ಕಾರ್ಡ್‌ಗಳ ಇ-ವಿತರಣೆಯನ್ನು ಪ್ರಧಾನಿ ನರೇಂದ್ರ ಮೋದಿ ಮಾಡಿದ್ದಾರೆ ಎಂದು ಮಾಹಿತಿ ನೀಡಿದರು. ಸುಮಾರು ೩ ಲಕ್ಷ ೧೮ ಸಾವಿರ ಹಳ್ಳಿಗಳ ಡ್ರೋನ್ ಸಮೀಕ್ಷೆಗಳು ಪೂರ್ಣಗೊಂಡಿವೆ ಎಂದು ಸಚಿವರು ತಿಳಿಸಿದರು.

**<><*<><>*><>**

ದೇಶಾದ್ಯಂತ ಜಿಎಸ್‌ಟಿ ವರ್ಗೀಕರಣ ಮತ್ತು ತೆರಿಗೆ ಅನುಷ್ಠಾನಕ್ಕೆ ಜಿಎಸ್‌ಟಿ ಮಂಡಳಿಗೆ ಸಾಂವಿಧಾನಿಕ ಅಧಿಕಾರವಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿ ಇಂದು ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಯಾವುದೇ ಜಿಎಸ್‌ಟಿ ವರ್ಗೀಕರಣದ ನಿರ್ಧಾರ ಏಕಪಕ್ಷೀಯ ನಿರ್ಧಾರವಲ್ಲ. ಬದಲಿಗೆ ಮಂಡಳಿಯ ನಿರ್ಧಾರ ಎಂದು ಅವರು ಸ್ಪಷ್ಟಪಡಿಸಿದರು. ಸಮಿತಿಯೊಂದಿಗೆ ಚರ್ಚಿಸಿ, ಸಮಸ್ಯೆಗಳನ್ನು ಕೈಗೆತ್ತಿಕೊಳ್ಳಲು ಆಯಾ ರಾಜ್ಯಗಳ ಹಣಕಾಸು ಸಚಿವರಿಗೆ ಸಂಪೂರ್ಣ ಅಧಿಕಾರವಿದೆ ಎಂದು ಅವರು ಹೇಳಿದರು. ಜಿಎಸ್‌ಟಿ ದರ ಗಣನೀಯವಾಗಿ ಕಡಿಮೆಯಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

<><*<><>*><>

ದೇಶವು ಇಲ್ಲಿಯವರೆಗೆ ಶೇಕಡಾ ೯೦ ರಷ್ಟು ವಿದೇಶಿ ನೇರ ಹೂಡಿಕೆಯನ್ನು ಸ್ವಯಂಚಾಲಿತ ಮಾರ್ಗದ ಮೂಲಕ ಸ್ವೀಕರಿಸಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ರಾಜ್ಯ ಸಚಿವ ಜತಿನ್ ಪ್ರಸಾದ ಲೋಕಸಭೆಯಲ್ಲಿಂದು ತಿಳಿಸಿದ್ದಾರೆ. ಈ ಕುರಿತು ಲೋಕಸಭೆಗೆ ಲಿಖಿತ ಉತ್ತರ ನೀಡಿದ ಸಚಿವರು, ರಕ್ಷಣೆ, ವಿಮೆ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ, ಟೆಲಿಕಾಂ ಮತ್ತು ಬಾಹ್ಯಾಕಾಶ ಸೇರಿದಂತೆ ಕ್ಷೇತ್ರಗಳಲ್ಲಿ ಎಫ್‌ಡಿಐ ನೀತಿಯಲ್ಲಿ ಸುಧಾರಣೆಗಳನ್ನು ಕೈಗೊಳ್ಳಲಾಗಿದೆ. ಹೊಸ ಕೈಗಾರಿಕಾ ಪರವಾನಗಿಗಳನ್ನು ಬಯಸುವ ಕಂಪನಿಗಳಿಗೆ ಸ್ವಯಂಚಾಲಿತ ಮಾರ್ಗದ ಮೂಲಕ ರಕ್ಷಣಾ ವಲಯದಲ್ಲಿ ಎಫ್‌ಡಿಐ ಅನ್ನು ಶೇಕಡ ೭೪ ರವರೆಗೆ ಅನುಮತಿಸಲಾಗಿದೆ. ಇದು ಮೊದಲು ಶೇಕಡ ೪೯ ರಷ್ಟಿತ್ತು ಎಂದು ಹೇಳಿದರು. ಈ ವರ್ಷದ ಕೇಂದ್ರ ಬಜೆಟ್‌ನಲ್ಲಿ ವಿಮಾ ವಲಯಕ್ಕೆ ಎಫ್‌ಡಿಐ ಮಿತಿಯನ್ನು ಶೇಕಡಾ ೭೫ ರಿಂದ ೧೦೦ ಕ್ಕೆ ಹೆಚ್ಚಿಸಲಾಗಿದೆ. ಈ ವರ್ಧಿತ ಮಿತಿ ಭಾರತದಲ್ಲಿ ಸಂಪೂರ್ಣ ಪ್ರೀಮಿಯಂ ಅನ್ನು ಹೂಡಿಕೆ ಮಾಡುವ ಕಂಪನಿಗಳಿಗೆ ಲಭ್ಯವಿರುತ್ತದೆ ಎಂದು ಸಚಿವ ಜತಿನ್ ಪ್ರಸಾದ್ ಮಾಹಿತಿ ನೀಡಿದರು.

<><*<><>*><>

ಮಧ್ಯಪ್ರದೇಶದಲ್ಲಿ ನಡೆದ ಪುರುಷರ ಸ್ನೂಕರ್ ಪಂದ್ಯಾವಳಿಯಲ್ಲಿ ಭಾರತದ ಖ್ಯಾತ ಸ್ನೂಕರ್ ಆಟಗಾರ ಪಂಕಜ್ ಅಡ್ವಾನಿ ಬ್ರಿಜೇಷ್ ದಮನಿ ಅವರನ್ನು ೫-೧ ಅಂಕಗಳ ಅಂತರದಲ್ಲಿ ಸೋಲಿಸುವ ಮೂಲಕ ೧೦ನೇ ಬಾರಿ ಪುರುಷರ ಸ್ನೂಕರ್ ಕಿರೀಟ ಮುಡಿಗೇರಿಸಿಕೊಂಡಿದ್ದಾರೆ. ಇದು ಅವರ ೩೬ನೇ ರಾಷ್ಟ್ರೀಯ ಪ್ರಶಸ್ತಿಯಾಗಿದೆ. ಈ ಗೆಲುವಿನ ಮೂಲಕ ಪಂಕಜ್ ಅಡ್ವಾನಿ ಮುಂಬರುವ ಏಷ್ಯನ್ ಮತ್ತು ವಿಶ್ವ ಚಾಂಪಿಯನ್‌ಶಿಪ್‌ಗಳಲ್ಲಿ ಸ್ಥಾನ ಭದ್ರಪಡಿಸಿಕೊಂಡಿದ್ದಾರೆ.

<><*<><>*><>

ದೆಹಲಿ ಓಪನ್ ಟೆನಿಸ್‌ನಲ್ಲಿ, ಭಾರತದ ಮುಕುಂದ್ ಶಶಿಕುಮಾರ್, ಎರಡನೇ ಸುತ್ತಿಗೆ ಮುನ್ನಡೆದಿದ್ದಾರೆ. ಇಂದು ನಡೆದ ಪುರುಷರ ಸಿಂಗಲ್ಸ್‌ನ ಆರಂಭಿಕ ಸುತ್ತಿನಲ್ಲಿ ಶಶಿಕುಮಾರ್, ಫ್ರಾನ್ಸ್‌ನ ಸಾಸ್ಚಾ ಗುಯೆಮಾರ್ಡ್ ವೇಯೆನ್‌ಬರ್ಗ್ ಅವರನ್ನು ೪-೬, ೬-೨, ೬-೦ ಸೆಟ್‌ಗಳಿಂದ ಪರಾಭವಗೊಳಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**